ಖಾದರ್ ಆಶಯ | ಸಾಹಿತ್ಯ ಸಮ್ಮೇಳನ ಆಮಂತ್ರಣ ಬಿಡುಗಡೆ

ಒಗ್ಗೂಡುವಿಕೆಯಿಂದ ಯಶಸ್ಸು

ಕನ್ನಡ ಸಾಹಿತ್ಯ ಜಿಲ್ಲಾ ಸಮ್ಮೇಳನದ ಆಮಂತ್ರಣ ಸ್ವೀಕರ್ ಯು.ಟಿ.ಖಾದರ್ ಬಿಡುಗಡೆಗೊಳಿಸಿದರು. ಮಂಗಳೂರು ವಿವಿ ಕುಲಸಚಿವ ರಾಜು ಮೊಗವೀರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸದಾಶಿವ ಉಳ್ಳಾಲ್, ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಮತಾ ಗಟ್ಟಿ ಉಪಸ್ಥಿತರಿದ್ದರು.

■ ವಿಜಯವಾಣಿ ಸುದ್ದಿಜಾಲ ಉಳ್ಳಾಲ

ತಾಲೂಕಿನಲ್ಲಿ ನಡೆಯುವ ಸಮ್ಮೇಳನ ಶಾಲಾ ವಿದ್ಯಾರ್ಥಿಗಳು, ಸಾಹಿತಿಗಳು, ಸಾರ್ವಜನಿಕರ ಸಹಿತ ಎಲ್ಲರ ಒಗ್ಗೂಡುವಿಕೆಯಿಂದ ಯಶಸ್ವಿಯಾಗಿ ನಡೆಯಬೇಕು ಎಂದು ಸ್ಪೀಕರ್ ಯು.ಟಿ.ಖಾದರ್ ಹೇಳಿದರು.

ದ.ಕ.ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಮಂಗಳೂರು ವಿವಿ ಮಂಗಳ ಸಭಾಂಗಣದಲ್ಲಿ ಫೆ.21, 22ರಂದು ನಡೆಯಲಿರುವ 27ನೇ ಕನ್ನಡ ಸಾಹಿತ್ಯ ಜಿಲ್ಲಾ ಸಮ್ಮೇಳನ ಪ್ರಯುಕ್ತ ವಿ.ವಿ.ವಿಜ್ಞಾನ ಸಂಕೀರ್ಣದ ಹಳೇ ಸೆನೆಟ್ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಮಾಲೋಚನಾ ಸಭೆಯಲ್ಲಿ ಆಮಂತ್ರಣ ಬಿಡುಗಡೆಗೊಳಿಸಿ ಮಾತನಾಡಿದರು.

ಸಾಹಿತ್ಯ ಸಮ್ಮೇಳನ, ಗೋಷ್ಠಿಗಳು, ಸಾಂಸ್ಕೃತಿಕ ಕಾರ್ಯಕ್ರಮಗಳ ಜತೆಗೆ ಊರಿನ ಜನರಲ್ಲಿ ಕನ್ನಡಾಭಿಮಾನ ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಸಂಘಟಕರು, ಪದಾಧಿಕಾರಿಗಳ ಪಾತ್ರ ಅತ್ಯಂತ ಮಹತ್ತರವಾಗಿದೆ. ಈ ಸಮ್ಮೇಳನ ರಾಜ್ಯಕ್ಕೆ ಮಾದರಿಯಾಗಬೇಕು ಎಂದರು.

ಮಂಗಳೂರು ವಿವಿ ಕುಲಸಚಿವ ರಾಜು ಮೊಗವೀರ, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸದಾಶಿವ ಉಳ್ಳಾಲ್, ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಮತಾ ಗಟ್ಟಿ, ಕಸಾಪ ಜಿಲ್ಲಾಧ್ಯಕ್ಷ ಡಾ.ಎಂ.ಪಿ.ಶ್ರೀನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಆರ್.ಈಶ್ವರ್, ಉಳ್ಳಾಲ ನಗರಸಭೆಯ ಪೌರಾಯುಕ್ತ ಮತ್ತಡಿ, ಕೋಣಾಜೆ ಗ್ರಾಪಂ ಅಧ್ಯಕ್ಷೆ ಗೀತಾ ಡಿ.ಕುಂದರ್, ಕೋಟೆಕಾರ್ ಪ.ಪಂ.ಮುಖ್ಯಾಧಿಕಾರಿ ಮಾಲಿನಿ, ಶಿಶು ಅಭಿವೃದ್ಧಿ ಅಧಿಕಾರಿ ಶೈಲಾ ಕಾರಗಿ ಉಪಸ್ಥಿತರಿದ್ದರು.

ರವೀಂದ್ರ ರೈ ಕಲ್ಲಿಮಾರ್ ಸ್ವಾಗತಿಸಿದರು. ಡಾ.ಧನಂಜಯ ಕುಂಬ್ಳೆ ಕಾರ್ಯಕ್ರಮದ ರೂಪುರೇಶೆ ಮುಂದಿಟ್ಟರು. ಚಂದ್ರಹಾಸ ಶೆಟ್ಟಿ ವಂದಿಸಿದರು. ತ್ಯಾಗಂ ಹರೇಕಳ ನಿರೂಪಿಸಿದರು.

30 ಪುಸ್ತಕ ಮಳಿಗೆಗಳು, ಕರಾವಳಿಯ ಸಾಂಸ್ಕೃತಿಕ ಪರಿಚಯಕ್ಕಾಗಿ ವಸ್ತು ಪ್ರದರ್ಶನ ಹಾಗೂ ಇತರ ಮಳಿಗೆಗಳು ಇರಲಿದೆ. 18 ಕೃತಿಗಳು ಬಿಡುಗಡೆಗೊಳ್ಳಲಿದೆ. ಸುಮಾರು 30 ಲಕ್ಷ ಖರ್ಚು ಅಂದಾಜಿಸಲಾಗಿದ್ದು, ಆರ್ಥಿಕ ಸಮಿತಿ ರಚಿಸಿ ಹಲವು ದಾನಿಗಳನ್ನು ಸಂಪರ್ಕಿಸಲಾಗಿದೆ. ಆಹಾರ ಸಾಮಗ್ರಿ ಸಂಗ್ರಹಿಸುವ ನಿಟ್ಟಿನಲ್ಲಿ ಹಸಿರು ಹೊರೆಕಾಣಿಕೆ ಸಮಿತಿ ರಚಿಸಲಾಗಿದೆ.

| ಡಾ.ಧನಂಜಯ ಕುಂಬ್ಳೆ ಕಸಾಪ ಉಳ್ಳಾಲ ತಾಲೂಕು ಅಧ್ಯಕ್ಷ

Scanned with OKEN Scanner